ಅ) ಗೌರಿಬಿದನೂರು ತಾಲ್ಲೂಕಿನಲ್ಲಿ ಜ್ಞಾನಾರ್ಜನೆ ವೃದ್ಧಿಯ ಸಲುವಾಗಿ ಮಕ್ಕಳಿಗೋಸ್ಕರ ಒಂದು ಗ್ರಂಥಾಲಯವನ್ನು ತೆರೆಯುವ ಅವಶ್ಯಕತೆ ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ, ಮಕ್ಕಳ ಗ್ರಂಥಾಲಯವನ್ನು ಸ್ಥಾಪಿಸಿ ಸಿಬ್ಬಂದಿ ಹಾಗೂ ಮೂಲಭೂತ ಸೌಕರ್ಯಗಳನ್ನು ಯಾವಾಗ ಒದಗಿಸಲಾಗುವುದು?

ಶ್ರೀ ರೇವೂ ನಾಯಕ್ ಬೆಳಮಗಿ (ಲೋಕಶಿಕ್ಷಣ, ಸಾರ್ವಜನಿಕ ಗ್ರಂಥಾಲಯ, ಸಣ್ಣ ಉಳಿತಾಯ ಹಾಗೂ ಲಾಟರಿ ಮತ್ತು ಪಶುಸಂಗೋಪನೆ ಸಚಿವರು):

ಅ) ಇಲ್ಲ

ಆ) ಉದ್ಭವಿಸುವುದಿಲ್ಲ.

ವಿದುರಾಶ್ವತ್ಥ ದೇವಸ್ಥಾನದ ಮಾಸ್ಟರ್ ಪ್ಲಾನ್ ಯೋಜನೆ

882 (538) ಶ್ರೀ ಶಿವಶಂಕರ ರೆಡ್ಡಿ ಎನ್.ಹೆಚ್. (ಗೌರಿಬಿದನೂರು): ಮಾನ್ಯ ಉನ್ನತ ಶಿಕ್ಷಣ, ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಮುಜರಾಯಿ ಸಚಿವರು ಈ ಕೆಳಕಂಡ ಪ್ರಶ್ನೆಗೆ ದಯವಿಟ್ಟು ಉತ್ತರಿಸುವರೇ?

ಗೌರಿಬಿದನೂರು ತಾಲ್ಲೂಕಿನ ಶ್ರೀ ವಿದುರಾಶ್ವತ್ಥ ಪುಣ್ಯ ಕ್ಷೇತ್ರಕ್ಕೆ ಒಂದು ಮಾಸ್ಟರ್ ಪ್ಲಾನ್ ತಯಾರು ಮಾಡುವ ಯೋಜನೆಯು ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ಈ ಮಾಸ್ಟರ್ ಪ್ಲಾನ್ ಯಾವಾಗ ಜಾರಿಗೆ ತರಲಾಗುವುದು?

ಡಾ: ವಿ.ಎಸ್. ಆಚಾರ್ಯ (ಉನ್ನತ ಶಿಕ್ಷಣ, ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಮುಜರಾಯಿ ಸಚಿವರು):

ಹೌದು. 2011–12ನೇ ಸಾಲಿನಿಂದ ಮಾಸ್ಟರ್ ಪ್ಲಾನ್ ಯೋಜನೆಯನ್ನು ಹಂತಹಂತವಾಗಿ ಜಾರಿಗೆ ತರಲು ಕ್ರಮ ಕೈಗೊಳ್ಳಲಾಗುವುದು.

ಪಿ.ಡಿ.ಓ. ಅಧಿಕಾರಿಗಳ ಕಾರ್ಯವೈಖರಿ

883 (539) ಶ್ರೀ ಶಿವಶಂಕರರೆಡ್ಡಿ ಎನ್.ಹೆಚ್. (ಗೌರಿಬಿದನೂರು): ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಹಾಗೂ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಗೌರಿಬಿದನೂರು ತಾಲ್ಲೂಕಿನಲ್ಲಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳನ್ನು ಸರ್ಕಾರವು ಹೊಸದಾಗಿ ನೇಮಕ ಮಾಡಿದ್ದು, ಈ ಅಧಿಕಾರಿಗಳು ಯಾವ ಯಾವ ಕೆಲಸ ಕಾರ್ಯಗಳನ್ನು ಮತ್ತು ಪಂಚಾಯತಿ ಕಾರ್ಯದರ್ಶಿಯವರು ಯಾವ ಯಾವ ಕೆಲಸಗಳನ್ನು ನಿರ್ವಹಿಸುವವರಾಗಿರುವರು ಎಂಬುದರ ಬಗ್ಗೆ ಗೊಂದಲ ಸೃಷ್ಟಿಯಾಗಿ ಅಭಿವೃದ್ಧಿ ಕೆಲಸಗಳು ಕುಂಠಿತವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಇದರ ಬಗ್ಗೆ ಸ್ಪಷ್ಟವಾದ ಮಾಹಿತಿಯನ್ನು ಸರ್ಕಾರವು ನೀಡಿ ಅಭಿವೃದ್ಧಿ ಕೆಲಸಗಳನ್ನು ಸುಸಲಿತವಾಗಿ ಮಾಡಲು ಅನುವು ಮಾಡಿಕೊಡುವುದೇ? (ವಿವರ ನೀಡುವುದು)

ಶ್ರೀ ಜಗದೀಶ್ ಶೆಟ್ಟರ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಹಾಗೂ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಸಚಿವರು):

ಅ) ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಮತ್ತು ಗ್ರಾಮ ಪಂಚಾಯಿತಿ ಕಾರ್ಯದರ್ಶಿಗಳ ಕರ್ತವ್ಯಗಳ ಬಗ್ಗೆ ಯಾವುದೇ ಗೊಂದಲ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ. ಮತ್ತು ಇದರಿಂದ ಅಭಿವೃದ್ಧಿ ಕೆಲಸಗಳು ಕುಂಠಿತವಾಗಿರುವುದಿಲ್ಲ.

ಆ) ಈ ಬಗ್ಗೆ ಈಗಾಗಲೇ ಕರ್ನಾಟಕ ಪಂಚಾಯತ್ ರಾಜ್ ಕಾಯಿದೆ, 1993ರ ಪ್ರಕರಣ 2, 111, 112, 113 ಮತ್ತು 241 ಕ್ಕೆ ತಿದ್ದುಪಡಿ ಮಾಡಿ ಕರ್ನಾಟಕ ಪಂಚಾಯತ್ ರಾಜ್ (ತಿದ್ದುಪಡಿ) ಅಧ್ಯಾದೇಶ, 2010 ನ್ನು ದಿನಾಂಕ: 4-11-2010ರಂದು ಹೊರಡಿಸಲಾಗಿದೆ. ಅದರಂತೆ ಈ ಹಿಂದೆ